**ಓ.ಎಸ್.ನಂಃ 56/2023**

**ಡಿಡಬ್ಲ್ಯೂ-1**

**ಸಾಕ್ಷಿಯನ್ನು ಕರೆಯಿಸಿ ದಿನಾಂಕಃ 14.11.2025 ರಂದು ಪ್ರಮಾಣಿಕರಿಸಲಾಯಿತು.**

**ಪಾಟೀ ಸವಾಲು: ವಾದಿ ಪರ ವಕೀಲರಿಂದಃ**

ನನ್ನ ಪ್ರಮಾಣ ಪತ್ರದ ವಿಷಯಗಳು ನನಗೆ ಗೊತ್ತು. ದಾವ ಸ್ವತ್ತು ಮೂಲತಃ ಮಾದಪ್ಪ ಬಿನ್ ಮಾದಪ್ಪರವರಿಗೆ ಸೇರಿದ್ದು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯ ತಂದೆಯ ಹೆಸರು ಮಾದಪ್ಪ ಎಂದರೆ ಸರಿ. ಮಾದಪ್ಪ ರವರ ತಂದೆ ಹೆಸರು ಚೆನ್ನಪ್ಪ. ಚೆನ್ನಪ್ಪರವರ ತಂದೆ ಹೆಸರು ಮಾದಪ್ಪ ಎಂದರೆ ನನಗೆ ಗೊತ್ತಿಲ್ಲ. ವಾದಿಯ ತಾತನಿಂದ ವಾದಿಯ ತಂದೆಗೆ ದಾವ ಸ್ವತ್ತು ಬಂದಿದೆ ಎಂದರೆ ಸರಿಯಲ್ಲ. ನನ್ನ ಪ್ರತಿವಾದ ಪತ್ರದಲ್ಲಿ ಹೇಳಿರುವ ಚೆಕ್ಕುಬಂಧಿ ಸರಿ ಇದೆ. ನನ್ನ ತಾತ ಮಲ್ಲಹಳ್ಳಿಯಿಂದ ಮರಳ್ಳಿ ಗ್ರಾಮಕ್ಕೆ ವಲಸೆ ಬಂದಿರುತ್ತಾರೆ ಎಂದರೆ ಸರಿ. ನನ್ನ ತಾತನನ್ನು ಮಲ್ಲಹಳ್ಳಿ ಬಸಪ್ಪ ಎಂದು ಕರೆಯುತ್ತಾರೆ ಎಂದರೆ ಸರಿ. ವಾದಿಯು ದಾವ ಸ್ವತ್ತಿನಲ್ಲಿ ಸ್ವಾಧೀನದಲ್ಲಿ ಇದ್ದು. ನಾನು ಅವರ ಸ್ವಾಧೀನಕ್ಕೆ ತೊಂದರೆ ಕೊಡುತ್ತಿದ್ದೇನೆ ಎಂದರೆ ಸರಿಯಲ್ಲ. ವಾದಿಯ ದಾಖಲೆಗಳು ಕಾನೂನು ಬದ್ಧವಾಗಿದ್ದರು ಅವುಗಳನ್ನು ಸೃಷ್ಟಿಸಲಾಗಿದೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ವಾದಿಗಳ ಸ್ವಾಧೀನಕ್ಕೆ ತೊಂದರೆ ಕೊಟ್ಟ ಕಾರಣ ಈ ದಾವೆ ದಾಖಲಿಸಲಾಗಿದೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

**(ಗಿರೀಶ ಆರ್.ಬಿ)**
ಒಂದನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ
ಗುಂಡ್ಲುಪೇಟೆ